ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/5/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
Email:dte.commissioner@gmail.com
ದಿನಾಂಕ: 08.07.2024

## ಜ್ಞಾಪನ

ವಿಷಯ: ಜುಲೈ 2024 Makeup (SEE) ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಮುಖ್ಯ ಅಧೀಕ್ಷಕರುಗಳನ್ನು ನೇಮಿಸುವ ಕುರಿತು.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/5/ಇಸಿಎಸ್/2024 ದಿನಾಂಕ: 02.07.2024
2. ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/05/ಇಸಿಎಸ್/2024 ದಿನಾಂಕ: 03.07.2024

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020-21 ನೇ ಶೈಕ್ಷಣಿಕ ಸಾಲಿನಿಂದ ಜಾರಿಯಲ್ಲಿರುವ C-20 ಪಠ್ಯಕ್ರಮದಲ್ಲಿ ಪ್ರವೇಶ ಪಡೆದು 1 ರಿಂದ 6ನೇ ಸೆಮಿಸ್ಟರ್‌ಗಳಲ್ಲಿನ ವಿವಿಧ ಪ್ರಾಯೋಗಿಕ ವಿಷಯಗಳಲ್ಲಿ ಅನುತ್ತೀರ್ಣಗೊಂಡಿರುವ ಮತ್ತು Makeup CIE ಕಿರು ಪರೀಕ್ಷೆಗಳಲ್ಲಿ ಶೇ.40 ಆಂತರಿಕ ಅಂಕಗಳನ್ನು ಗಳಿಸಿ ಅಂತಿಮ ಪ್ರಾಯೋಗಿಕ ಪರೀಕ್ಷೆಗಳಿಗೆ ಅರ್ಹತೆ ಹೊಂದಿರುವ ವಿದ್ಯಾರ್ಥಿಗಳಿಗೂ ಸಹಿತ ದಿನಾಂಕ:08.07.2024 ರಿಂದ 13.07.2024 ರವರೆಗೆ Makeup (SEE) ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸಲಾಗುವುದು ಎಂದು ಉಲ್ಲೇಖ (1) ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಮೇ 2024 ರ ಸೆಮಿಸ್ಟರ್ ಪ್ರಾಯೋಗಿಕ ಪರೀಕ್ಷೆಗಳಿಗೆ ಮುಖ್ಯ ಅಧೀಕ್ಷಕರುಗಳಾಗಿ ಕಾರ್ಯ ನಿರ್ವಹಿಸಿದ ಅಧಿಕಾರಿ/ಉಪನ್ಯಾಸಕರುಗಳನ್ನೇ ಜುಲೈ 2024 Makeup (SEE) ಪ್ರಾಯೋಗಿಕ ಪರೀಕ್ಷೆಗಳಿಗೆ ಮುಖ್ಯ ಅಧೀಕ್ಷಕರುಗಳನ್ನಾಗಿ ನೇಮಿಸಲಾಗಿದ್ದು, ಸದರಿ ಉಪನ್ಯಾಸಕರುಗಳನ್ನು, ಸಂಬಂಧಿಸಿದ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಿನ್ಸಿಪಾಲರುಗಳು ಜುಲೈ 2024 Makeup (SEE) ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಸೂಚಿಸಿ ಕೂಡಲೇ ಕಾರ್ಯ ಬಿಡುಗಡೆ ಮಾಡಲು ತಿಳಿಸಲಾಗಿದೆ.

ಸದರಿ ಪ್ರಾಯೋಗಿಕ ಪರೀಕ್ಷೆಯ ಮುಖ್ಯ ಅಧೀಕ್ಷಕರುಗಳು ತಮಗೆ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಕಾರ್ಯ ವರದಿ ಮಾಡಿಕೊಂಡು ಉಲ್ಲೇಖ (2) ರ ಜ್ಞಾಪನದನ್ವಯ ಪರೀಕ್ಷಕರ ಸಮಿತಿಯ ಅಧ್ಯಕ್ಷರುಗಳೊಂದಿಗೆ ಸಮನ್ವಯತೆಯಿಂದ, ಪ್ರತಿ ಪಾಯೋಗಿಕ ಪರೀಕ್ಷೆ ನಡೆಸಲು ಒಬ್ಬರು ಬಾಹ್ಯ ಪರೀಕ್ಷಕರು ಕಡ್ಡಾಯವಾಗಿರುವಂತೆ ನೋಡಿಕೊಂಡು, ನಿಗದಿತ ಪಠ್ಯಕ್ರಮದಲ್ಲಿ ಸೂಚಿಸಿರುವ ಸ್ಕೀಂ ಆಫ್ ವ್ಯಾಲುಯೇಷನ್ ಪ್ರಕಾರ ಪ್ರಾಯೋಗಿಕ ಪರೀಕ್ಷೆಗಳು ಸಮರ್ಪಕವಾಗಿ ನಡೆಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ಮೇ 2024 ರ ಸೆಮಿಸ್ಟರ್ ಪ್ರಾಯೋಗಿಕ ಪರೀಕ್ಷೆಗಳ ಮುಖ್ಯ ಅಧೀಕ್ಷಕರುಗಳು- ಜುಲೈ 2024 Makeup (SEE) ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಅಗತ್ಯ ಕ್ರಮಕ್ಕಾಗಿ

ಪ್ರತಿ:
1. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಮುಖ್ಯ ಅಧೀಕ್ಷಕರು/ ಪ್ರಿನ್ಸಿಪಾಲರುಗಳಿಗೆ - ಮುಂದಿನ ಕ್ರಮಕ್ಕಾಗಿ
2. ಇ ಆಡಳಿತ - ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3. ಗಣಕ ಕೇಂದ್ರ - ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು